ಅಲ್ಲದೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ನಿಧಿಯಿಂದ ಪ್ರಾಂಗಣದ ಹೊರಗಡೆ ಇರುವ ಗ್ರಾಮೀಣ ಸಂಪರ್ಕ ರಸ್ತೆಗಳ ಅಭಿವೃದ್ಧಿಯನ್ನು ನಿಯಮ 60(ಸಿ)ಗಳನ್ವಯ ಸಮಿತಿಯ ಆರ್ಥಿಕ ಪರಿಸ್ಥಿತಿಗನುಗುಣವಾಗಿ ಕೈಗೊಳ್ಳಲಾಗುತ್ತಿದೆ.

ಅ) ಮತ್ತು ಇ) ಮಾನ್ಯ ಶಾಸಕರುಗಳಿಂದ ಹಾಗೂ ಇತರರಿಂದ ಸ್ವೀಕರಿಸಿದ ಮನವಿಗಳನ್ನು ಸೂಕ್ತ ಕ್ರಮಕ್ಕಾಗಿ ಪರಿಶೀಲಿಸಲಾಗುತ್ತಿದೆ.

1452(1713) ಶ್ರೀ ಮಲ್ಲಿಕಾರ್ಜುನ್ ಸಿದ್ದರಾಮಪ್ಪ ಖೂಬ(ಬಸವಕಲ್ಯಾಣ) ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೀದರ್ ಜಿಲ್ಲಾ ಬಸವಕಲ್ಯಾಣ ತಾಲ್ಲೂಕಿನಾದ್ಯಂತ ಎ.ಪಿ.ಎಂ.ಸಿ. ಅಡಿಯಲ್ಲಿ ಬರುವ ಗ್ರಾಮೀಣ ರಸ್ತೆಗಳ ತುಂಬಾ ದುಸ್ಥಿತಿಯಲ್ಲಿದ್ದು, ಇದರ ಅಭಿವೃದ್ಧಿಗೆ ಸರ್ಕಾರ ಆದೇಶ ನೀಡಿರುವುದು ನಿಜವಲ್ಲವೇ?

ಆ) ಹಾಗಿದ್ದಲ್ಲಿ ಇದುವರೆವಿಗೂ ರಸ್ತೆಯ ದುರಸ್ತಿಗೆ ಯಾವುದೇ ಕ್ರಮ ಕೈಗೊಳ್ಳದೇ ಇರಲು ಕಾರಣವೇನು?

ಇ) ಕೂಡಲೇ ಗ್ರಾಮೀಣ ಭಾಗದ ರಸ್ತೆಗಳ ದುರಸ್ತಿಗೆ ಎ.ಪಿ.ಎಂ.ಸಿ. ಅನುಧಾನದಡಿಯಲ್ಲಿ ಅನುಧಾನ ಮಂಜೂರು ಮಾಡಿ ರಸ್ತೆ ಅಭಿವೃದ್ಧಿಗೊಳಿಸಿ ಜನತೆಗೆ ಅನುಕೂಲ ಮಾಡಿಕೊಡುವುದು ಯಾವಾಗ?

ಶ್ರೀ ಪ್ರಕಾಶ್ ಭಾ.ಹುಕ್ಕೇರಿ (ಕೃಷಿ ಮಾರುಕಟ್ಟೆ ಸಚಿವರು):

ಅ) ಇಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ) ಕಾಯ್ದೆಯ ನಿಯಮ 60(ಸಿ) ಅಡಿಯಲ್ಲಿ ಸಮಿತಿಯ ಆರ್ಥಿಕ ಪರಿಸ್ಥಿತಿಗನುಗುಣವಾಗಿ ಗ್ರಾಮೀಣ ಸಂಪರ್ಕ ರಸ್ತೆಗಳನ್ನು ನಿಧಿಯಿಂದ ಅಭಿವೃದ್ಧಿಗೊಳಿಸಲು ಅವಕಾಶವಿರುತ್ತದೆ. ಆದ್ದರಿಂದ ಈ ನಿಯಮದಡಿಯಲ್ಲಿ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುತ್ತದೆ.

1453(1747) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪರಸಗಡ ಮತ ಕ್ಷೇತ್ರದ ಗ್ರಾಮಗಳಲ್ಲಿ ಜನಸಂಪರ್ಕ ಸಭೆ ಕೈಗೊಂಡಾಗ ಈ ತಾಲ್ಲೂಕಿನಲ್ಲಿ 2001ರ ಜನಗಣತಿ ಪ್ರಕಾರ ಸರಾಸರಿ ಪ್ರತಿಶತ 73ರಷ್ಟು ಹಳದಿ ಕಾರ್ಡುಗಳ ವಿತರಣೆ ಯಾಗಿದ್ದರೂ ಇನ್ನೂ ಸಾಕಷ್ಟು ಅರ್ಹ ಕುಟುಂಬಗಳು ಹಳದಿ ಪಡಿತರ ಚೀಟಿ ಪಡೆಯುವಲ್ಲಿ ವಂಚಿತರಾಗಿರುವುದು ನಿಜವೇ?

ಆ) ಹಳದಿ ಪಡಿತರ ಚೀಟಿಗಳನ್ನು ಅನರ್ಹ ಫಲಾನುಭವಿಗಳಿಗೆ ವಿತರಣೆಯಾಗಿರುವುದು ಸಹ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಅನರ್ಹ ಫಲಾನುಭವಿಗಳಿಗೆ ಹಂಚಿಕೆಯಾದ ಹಳದಿ ಪಡಿತರ ಚೀಟಿಗಳ ಮರು ಪರಿಶೀಲನೆ ಮಾಡಿ ಅನರ್ಹ ಹಳದಿ ಪಡಿತರ ಚೀಟಿಗಳನ್ನು ರದ್ದುಪಡಿಸಿ ಅರ್ಹ ಕುಟುಂಬಗಳಿಗೆ ಹಂಚುವಲ್ಲಿ ಸರ್ಕಾರದ ಕ್ರಮಗಳೇನು?

ಶ್ರೀ ಹೆಚ್.ಎಸ್. ಮಹದೇವ ಪ್ರಸಾದ್ (ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು):

ಅ) ಬೆಳಗಾವಿ ಜಿಲ್ಲೆಯ ಪರಸಗಡ ಮತಕ್ಷೇತ್ರದಲ್ಲಿ 2001ನೇ ಜನಗಣತಿಯ ಅನುಸಾರ 44320 ಕುಟುಂಬಗಳಿದ್ದು 36786 ಹಳದಿ ಪಡಿತರ ಚೀಟಿಗಳನ್ನು ವಿತರಿಸಲಾಗಿತ್ತು. ಇವುಗಳ ಪೈಕಿ 2004ನೇ ಜುಲೈ ಮಾಹೆಯಿಂದ ಡಿಸೆಂಬರ್‌ವರೆಗೆ 1435 ಪಡಿತರ ಚೀಟಿಗಳನ್ನು ಅನರ್ಹವೆಂದು ಪರಿಗಣಿಸಿ ರದ್ದುಪಡಿಲಾಗಿರುತ್ತದೆ. ಹಾಲಿ ಈಗ 35351 ಪಡಿತರ ಚೀಟಿಗಳಿಗೆ ಆಹಾರ ಧಾನ್ಯ ವಿತರಿಸಲಾಗುತ್ತಿದೆ. ಇದು ಶೇ.79.76 ಆಗುವುದು, ಇಷ್ಟಾದರೂ ಕೆಲವು ಕುಟುಂಬಗಳಿಂದ ಹಳದಿ ಪಡಿತರ ಚೀಟಿಗಳಿಗೆ ಬೇಡಿಕೆ ಇರುವುದು.

ಆ) ಹೌದು.

ಇ) ಅನರ್ಹ ಫಲಾನುಭವಿಗಳಿಗೆ ಹಂಚಿಕೆಯಾದ ಹಳದಿ ಪಡಿತರ ಚೀಟಿಗಳ ಮರು ಪರಿಶೀಲನೆ ಮಾಡಿ ಅನರ್ಹ ಪಡಿತರ ಚೀಟಿಗಳನ್ನು ರದ್ದುಗೊಳಿಸಿ, ಅರ್ಹ ಕುಟುಂಬಗಳಿಗೆ ಬಿ.ಪಿ.ಎಲ್, ಪಡಿತರ ಚೀಟಿಗಳನ್ನು ವಿತರಿಸಲು ಸರ್ಕಾರಿ ಆದೇಶ ಸಂಖ್ಯೆ: ಅನಾಸ 114 ಡಿಆರ್‌ಎ 2004, ದಿನಾಂಕ: 10-1-2005ರಲ್ಲಿನ ಆದೇಶದಂತೆ ಮನೆ ಮನೆ ಪುನರ್ ಸಮೀಕ್ಷಾ ಕಾರ್ಯವನ್ನು ಜನವರಿ 2005ರಿಂದ ಪ್ರಾರಂಭಿಸಲಾಗಿದೆ. ಏಪ್ರಿಲ್ 2005ರ ಅಂತ್ಯಕ್ಕೆ ಪುನರ್ ಸಮೀಕ್ಷಾ ಕಾರ್ಯ ಪೂರ್ಣಗೊಳ್ಳಲಿದ್ದು, ಆಯ್ಕೆಯಾದ ಫಲಾನುಭವಿಗಳ ಪಟ್ಟಿಯನ್ನು ಗ್ರಾಮಸಭೆಗಳಲ್ಲಿಟ್ಟು, ಅನುಮೋದನೆ ಪಡೆದ ನಂತರ ಅರ್ಹ ಕುಟುಂಬಗಳಿಗೆ ಬಿ.ಪಿ.ಎಲ್, ಪಡಿತರ ಚೀಟಿಗಳನ್ನು ವಿತರಿಸಲಾಗುವುದು. ಅನರ್ಹ ಪಡಿತರ ಚೀಟಿಗಳನ್ನು ರದ್ದುಗೊಳಿಸುವ ಕಾರ್ಯ ಮುಂದುವರೆದಿರುತ್ತದೆ.

1454(785) ಶ್ರೀ ನರಸಿಂಹಸ್ವಾಮಿ.ಜೆ(ದೊಡ್ಡಬಳ್ಳಾಪುರ) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರೈತರು ಬೆಳೆದ ರಾಗಿ ಮತ್ತು ಜೋಳಗಳಿಗೆ ಬೆಂಬಲ ಬೆಲೆ ನಿಗಧಿ ಪಡಿಸಲಾಗಿದೆಯೇ;

ಆ) ಇದೇ ರೀತಿ ಇನ್ನು ಯಾವ ಯಾವ ಬೆಳೆಗಳಿಗೆ ಬೆಂಬಲ ಬೆಲೆ ನಿಗಧಿಪಡಿಸಲು ಸರ್ಕಾರ ಕ್ರಮ ತೆಗೆದುಕೊಂಡಿದೆ?

ಶ್ರೀ ಹೆಚ್.ಎಸ್.ಮಹದೇವ ಪ್ರಸಾದ್: (ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು):

ಅ) ಹೌದು.

ಆ) ಇದೇ ರೀತಿ ಮೆಕ್ಕೆ ಜೋಳ, ಬಿಳಿ ಜೋಳ ಮತ್ತು ಭತ್ತ ಬೆಳೆಗಳಿಗೆ ಬೆಂಬಲ ಬೆಲೆ ನಿಗಧಿ ಪಡಿಸಲಾಗಿದೆ.

1455(1606) ಶ್ರೀ ನರೇಂದ್ರ ಬಾಬು ಎನ್.ಎಲ್., (ರಾಜಾಜಿನಗರ) ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

1) ರಾಜಾಜಿನಗರ ವಿಧಾನ ಸಭಾ ವ್ಯಾಪ್ತಿಯಲ್ಲಿ ವಿತರಿಸಲಾದ ಹಳದಿ ಮತ್ತು ಅಂತ್ಯೋದಯ (ಬಿಪಿಎಲ್) ಪಡಿತರ ಚೀಟಿಗಳ ಸಂಖ್ಯೆ ಎಷ್ಟು; (ಪಾಲಿಕೆ ವಾರ್ಡ್ ಪ್ರಕಾರ ವಿವರ ನೀಡುವುದು).

2) ಈ ತಾತ್ಕಾಲಿಕ ಕಾರ್ಡುಗಳನ್ನು ರದ್ದುಪಡಿಸಲು ಕಾರಣಗಳೇನು; ರದ್ದುಪಡಿಸಿದವುಗಳ ಬದಲಿಗೆ ಯಾವ ವ್ಯವಸ್ಥೆ ಕಲ್ಪಿಸಲಾಗಿದೆ; ಕಾರ್ಡು ವಿತರಿಸಲು ಇರುವ ಮಾನದಂಡವೇನು;

3) ಸದರಿ ಫಲಾನುಭವಿಗಳಿಗೆ ವಿತರಿಸಲು ಆಹಾರ ಸಾಮಗ್ರಿ ಪ್ರಮಾಣವೆಷ್ಟು;